ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ
ವಿದ್ಯಾಸಂಗಮ, ರಾಷ್ಟ್ರೀಯ ಹೆದ್ದಾರಿ – 04, ಭೂತರಾಮನಹಟ್ಟಿ, ಬೆಳಗಾವಿ -591156
(ನ್ಯಾಕ್‌ಮಾನ್ಯತೆ ಬಿ+ ಗ್ರೇಡ್-2021) ಪಿಎಂ-ಉಷಾ (ಮೇರು)
(ಹಿಂದಿನ ಪದನಾಮ – 'ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ')

KITTURU RANI CHANNAMMA UNIVERSITY
Vidyasangama, National Highway – 04, Bhootaramanahatti, Belagavi – 591156
(NAAC Accredited with B+ Grade – 2021) PM-UShA (MERU)
*(Formerly known as 'Rani Channamma University, Belagavi')*

**Email:** registrar@rcub.ac.in
ಕುಲಸಚಿವರ ಕಾರ್ಯಾಲಯ
**Office of the Registrar**
**Website:** www.rcub.ac.in
**Phone No.: 0831-2565234**

ಕ್ರ. ಸಂ: ಕಿರಾಚವಿ/ಬೆಳಗಾವಿ/ಕುಸಕಾ/ಜಿಎಡಿ/2026-27/ 4146 ದಿನಾಂಕ: 16 SEP 2026

## ಸುತ್ತೋಲೆ

**ವಿಷಯ:** ರಾಜ್ಯ ಸರ್ಕಾರಿ ಕಾರ್ಯಕ್ರಮಗಳಲ್ಲಿ "ವಂದೇ ಮಾತರಂ" ಗೀತೆಯನ್ನು ಕಡ್ಡಾಯವಾಗಿ ಹಾಡುವ ಕುರಿತು.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/03/HCR/2026, ದಿನಾಂಕ:08-09-2026.
2. ಮಾನ್ಯ ಕುಲಪತಿಗಳ ನಿರ್ದೇಶನ ದಿನಾಂಕ: 10-09-2026

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು, ನಿರ್ದೇಶಕರು/ಸಂಯೋಜಕರು, ಸ್ನಾತಕೋತ್ತರ ಕೇಂದ್ರಗಳ ಮುಖ್ಯಸ್ಥರು ಹಾಗೂ ಪ್ರಾಚಾರ್ಯರು, ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯ, ಬೆಳಗಾವಿ ಮತ್ತು ವಿಶ್ವವಿದ್ಯಾಲಯದ ಅಧೀನದಲ್ಲಿರುವ ಎಲ್ಲಾ ಸಂಯೋಜಿತ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಭಾರತದ ರಾಷ್ಟ್ರೀಯ ಚಳುವಳಿಯ ಸಂದರ್ಭದಲ್ಲಿ ದೇಶದ ಜನರಲ್ಲಿ ರಾಷ್ಟ್ರೀಯತೆ, ಏಕತೆ ಹಾಗೂ ದೇಶಭಕ್ತಿಯ ಭಾವನೆಯನ್ನು ಮೂಡಿಸುವಲ್ಲಿ **"ವಂದೇ ಮಾತರಂ"** ಗೀತೆಯು ಮಹತ್ವದ ಪಾತ್ರವನ್ನು ವಹಿಸಿದೆ. ಈ ಹಿನ್ನೆಲೆಯಲ್ಲಿ, ಭಾರತ ಸರ್ಕಾರದ ಗೃಹ ಸಚಿವಾಲಯವು "ವಂದೇ ಮಾತರಂ" ಗೀತೆಯ ಅಧಿಕೃತ ಆವೃತ್ತಿ ಹಾಗೂ ವಿವಿಧ ಸರ್ಕಾರಿ ಮತ್ತು ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಅದರ ಗಾಯನ/ವಾದನಕ್ಕೆ ಸಂಬಂಧಿಸಿದಂತೆ ಸಂದರ್ಭಾನುಸಾರ ಪಾಲಿಸಬೇಕಾದ ಮಾರ್ಗಸೂಚಿಗಳನ್ನು ಹೊರಡಿಸಿದೆ. ಸದರಿ ಮಾರ್ಗಸೂಚಿಗಳಲ್ಲಿ "ವಂದೇ ಮಾತರಂ" ಗೀತೆಯ ವಾದನ (Playing) ಹಾಗೂ ಸಾಮೂಹಿಕ ಗಾಯನ (Mass Singing)ಕ್ಕೆ ಸಂಬಂಧಿಸಿದ ಸಂದರ್ಭಗಳನ್ನು ಪ್ರತ್ಯೇಕವಾಗಿ ನಿರ್ದಿಷ್ಟಪಡಿಸಲಾಗಿದೆ.

ಮುಂದುವರೆದು, ರಾಜ್ಯದಲ್ಲಿ ನಡೆಯುವ ಸರ್ಕಾರಿ ಕಾರ್ಯಕ್ರಮಗಳು ಹಾಗೂ ಸಮಾರಂಭಗಳ ಸ್ವರೂಪ ಮತ್ತು ಸಂದರ್ಭಕ್ಕೆ ಅನುಗುಣವಾಗಿ "ವಂದೇ ಮಾತರಂ" ಗೀತೆಯ ಗಾಯನ/ವಾದನದಲ್ಲಿ ಏಕರೂಪತೆ, ಗೌರವ ಹಾಗೂ ಸೂಕ್ತ ಶಿಷ್ಟಾಚಾರವನ್ನು ಕಾಪಾಡುವ ಉದ್ದೇಶದಿಂದ, ಈ ಕೆಳಕಂಡಂತೆ ಕ್ರಮವಹಿಸಲು ಸೂಚಿಸಲಾಗಿದೆ.

**ಆದ್ದರಿಂದ, ಮಾನ್ಯ ರಾಷ್ಟ್ರಪತಿಗಳು, ಮಾನ್ಯ ಉಪರಾಷ್ಟ್ರಪತಿಗಳು, ಮಾನ್ಯ ಪ್ರಧಾನಮಂತ್ರಿಗಳು ಹಾಗೂ ಮಾನ್ಯ ರಾಜ್ಯಪಾಲರು ಉಪಸ್ಥಿತರಿರುವ** ಕಾರ್ಯಕ್ರಮಗಳನ್ನು ಹೊರತುಪಡಿಸಿ, ರಾಜ್ಯ ಸರ್ಕಾರದ ಕಾರ್ಯಕ್ರಮಗಳು ಹಾಗೂ ಸಮಾರಂಭಗಳಲ್ಲಿ **"ವಂದೇ ಮಾತರಂ"** ಗೀತೆಯ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವಂತೆ ಈ ಮೂಲಕ ತಿಳಿಸಲಾಗಿದೆ.

**ಸಂತೋಷ ಕಾಮಗೌಡ, ಕೆ.ಎ.ಎಸ್.**
**ಕುಲಸಚಿವರು**
ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ

**ಇವರಿಗೆ,**

1. ಮುಖ್ಯಸ್ಥರುಗಳು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
2. ನಿರ್ದೇಶಕರು/ಸಂಯೋಜಕರು ಸ್ನಾತಕೋತ್ತರ ಕೇಂದ್ರಗಳು ವಿಜಯಪುರ.
3. ಪ್ರಾಚಾರ್ಯರು, ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಮಹಾವಿದ್ಯಾಲಯ, ಬೆಳಗಾವಿ.
4. ಪ್ರಾಚಾರ್ಯರು, ಸಂಯೋಜಿತ ಮಹಾವಿದ್ಯಾಲಯಗಳು, ಬೆಳಗಾವಿ ಮತ್ತು ವಿಜಯಪುರ ಜಿಲ್ಲೆ.
5. ರಕ್ಷಾ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಕುಲಸಚಿವರು (ಮೌಲ್ಯಮಾಪನ, ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
2. ಹಣಕಾಸು ಅಧಿಕಾರಿಗಳು, , ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
3. ಆಪ್ತಕಾರ್ಯದರ್ಶಿಗಳು, ಮಾನ್ಯ ಕುಲಪತಿಗಳ ಸಚಿವಾಲಯ, , ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
4. ಉಪಕುಲಸಚಿವರು, ಕುಲಸಚಿವರ ಕಾರ್ಯಾಲಯ, ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಸರ್ಕಾರಿ ಕಾರ್ಯಕ್ರಮಗಳಲ್ಲಿ "ವಂದೇ ಮಾತರಂ" ಗೀತೆಯನ್ನು ಹಾಡುವ ಬಗ್ಗೆ.

**ಓದಲಾಗಿದೆ:** ಭಾರತ ಸರ್ಕಾರದ ಗೃಹ ಸಚಿವಾಲಯದ ಪತ್ರ ಸಂಖ್ಯೆ: 14/2/2025-Public, ದಿನಾಂಕ:28.01.2026

**ಪ್ರಸ್ತಾವನೆ:**

ಭಾರತದ ರಾಷ್ಟ್ರೀಯ ಚಳವಳಿಯ ಸಂದರ್ಭದಲ್ಲಿ ದೇಶದ ಜನರಲ್ಲಿ ರಾಷ್ಟ್ರೀಯತೆ, ಏಕತೆ ಮತ್ತು ದೇಶಭಕ್ತಿಯ ಭಾವನೆಯನ್ನು ಮೂಡಿಸುವಲ್ಲಿ "ವಂದೇ ಮಾತರಂ" ಗೀತೆಯು ಮಹತ್ವದ ಪಾತ್ರವನ್ನು ವಹಿಸಿರುತ್ತದೆ.

ಭಾರತ ಸರ್ಕಾರದ ಗೃಹ ವ್ಯವಹಾರಗಳ ಸಚಿವಾಲಯವು "ವಂದೇ ಮಾತರಂ" ರಾಷ್ಟ್ರೀಯ ಗೀತೆಯ ಅಧಿಕೃತ ಆವೃತ್ತಿ ಹಾಗೂ ವಿವಿಧ ಸರ್ಕಾರಿ ಮತ್ತು ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಅದರ ಗಾಯನ ಅಥವಾ ವಾದನಕ್ಕೆ ಸಂಬಂಧಿಸಿದಂತೆ ಸಂದರ್ಭಾನುಸಾರ ಪಾಲಿಸಬೇಕಾದ ಮಾರ್ಗಸೂಚಿಗಳನ್ನು ಹೊರಡಿಸಿದೆ. ಭಾರತ ಸರ್ಕಾರದ ಮಾರ್ಗಸೂಚಿಗಳಲ್ಲಿ ರಾಷ್ಟ್ರೀಯ ಗೀತೆಯ ವಾದನ (Playing) ಮತ್ತು ಸಾಮೂಹಿಕ ಗಾಯನ (Mass Singing)ಕ್ಕೆ ಸಂಬಂಧಿಸಿದ ಸಂದರ್ಭಗಳನ್ನು ಪ್ರತ್ಯೇಕವಾಗಿ ನಿರ್ದಿಷ್ಟಪಡಿಸಲಾಗಿದೆ.

ರಾಜ್ಯದಲ್ಲಿ ನಡೆಯುವ ವಿವಿಧ ಸರ್ಕಾರಿ ಕಾರ್ಯಕ್ರಮಗಳು ಮತ್ತು ಸಮಾರಂಭಗಳ ಸ್ವರೂಪ ಹಾಗೂ ಸಂದರ್ಭಕ್ಕೆ ಅನುಗುಣವಾಗಿ "ವಂದೇ ಮಾತರಂ" ರಾಷ್ಟ್ರೀಯ ಗೀತೆಯ ವಾದನ/ಗಾಯನಕ್ಕೆ ಸಂಬಂಧಿಸಿದಂತೆ ಏಕರೂಪತೆ, ಗೌರವ ಮತ್ತು ಸೂಕ್ತ ಶಿಷ್ಟಾಚಾರವನ್ನು ಕಾಯ್ದುಕೊಳ್ಳುವ ಅಗತ್ಯವನ್ನು ಸರ್ಕಾರವು ಪರಿಗಣಿಸಿದೆ.

ಈ ಹಿನ್ನೆಲೆಯಲ್ಲಿ, ಸಚಿವ ಸಂಪುಟದ ತೀರ್ಮಾನದಂತೆ, ರಾಜ್ಯದಲ್ಲಿ ನಡೆಯುವ ಸರ್ಕಾರಿ ಕಾರ್ಯಕ್ರಮಗಳು ಮತ್ತು ಸಮಾರಂಭಗಳಲ್ಲಿ "ವಂದೇ ಮಾತರಂ" ರಾಷ್ಟ್ರೀಯ ಗೀತೆಯ ವಾದನ/ಗಾಯನಕ್ಕೆ ಸಂಬಂಧಿಸಿದಂತೆ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/03/HCR/2026 (ಭಾಗ-2), ಬೆಂಗಳೂರು,**
**ದಿನಾಂಕ: 08.09.2026.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾನ್ಯ ರಾಷ್ಟ್ರಪತಿಗಳು, ಉಪ ರಾಷ್ಟ್ರಪತಿಗಳು, ಪ್ರಧಾನಮಂತ್ರಿಗಳು ಹಾಗೂ ರಾಜ್ಯಪಾಲರು ಉಪಸ್ಥಿತರಿರುವ ಕಾರ್ಯಕ್ರಮಗಳನ್ನು ಹೊರತುಪಡಿಸಿ, ರಾಜ್ಯ ಸರ್ಕಾರದ ಕಾರ್ಯಕ್ರಮಗಳಲ್ಲಿ "ವಂದೇ ಮಾತರಂ" ಗೀತೆಯ ಮೊದಲ ಎರಡು ಚರಣಗಳನ್ನು ಮಾತ್ರ ಹಾಡಲು ಈ ಮೂಲಕ ಆದೇಶಿಸಿದೆ.

GAD
Circulate

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಂದೀಪ್ ಬಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ರಾಜಕೀಯ)

ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ
ಕುಲಸಚಿವರ ಕಾರ್ಯಾಲಯ
ಆವಕ/ಇ-ಆಫೀಸ್ ಸ್ವೀಕೃತಿ ಸಂಖ್ಯೆ: 3897
ದಿನಾಂಕ: 10/9/26
ವಿಭಾಗ/ಸಂಕಲನ:
ಕಛೇರಿ ಅಧೀಕ್ಷಕರು ಸಹಾಯಕ ಕುಲಸಚಿವರು ಕುಲಸಚಿವರು

ಇವರಿಗೆ:

1. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2. ಕಾರ್ಯದರ್ಶಿಗಳು, ಕರ್ನಾಟಕ ವಿಧಾನಪರಿಷತ್ತು/ವಿಧಾನಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
4. ಪೋಲಿಸ್ ಮಹಾನಿರೀಕ್ಷಕರು ಮತ್ತು ಮಹಾನಿರ್ದೇಶಕರು, ನೃಪತುಂಗ ರಸ್ತೆ, ಬೆಂಗಳೂರು.
5. ಎಲ್ಲಾ ಮಾನ್ಯ ಸಚಿವರುಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಗೌರವಾನ್ವಿತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
7. ಎಲ್ಲಾ ಪ್ರಾದೇಶಿಕ ಆಯುಕ್ತರು/ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
9. ಎಲ್ಲಾ ವಿಶ್ವವಿದ್ಯಾನಿಲಯಗಳ ಉಪ ಕುಲಪತಿಗಳು.
10. ಸರ್ಕಾರದ ಅಪರ ಕಾರ್ಯದರ್ಶಿಗಳು , ಸಚಿವ ಸಂಪುಟ ಶಾಖೆ, ವಿಧಾನಸೌಧ.
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಕಾರ್ಯದರ್ಶಿ, ಸಿಆಸುಇ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು